# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1551**

ಸದಸ್ಯರ ಹೆಸರು : **ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)**

ಉತ್ತರಿಸುವ ದಿನಾಂಕ : **17/03/2026**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ)ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪ್ರಸ್ತುತ ನೀಡಲಾಗುತ್ತಿರುವ ಗೌರವಧನದ ವಿವರಗಳೇನು; | ಬಂದಿದೆ.<br>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಸರ್ಕಾರದ ಆದೇಶದ ಸಂಖ್ಯೆ:ನಅಇ 156 ಎಂಎಲ್‌ಆರ್ 2015; ದಿನಾಂಕ:15/09/2016 ರನ್ವಯ ಮಾಸಿಕ ಗೌರವಧನವನ್ನು ಈ ಕೆಳಕಂಡಂತೆ ನೀಡಲಾಗುತ್ತಿದೆ: (ಕೆಳಗಿನ ಕೋಷ್ಟಕ) |
| ಆ | ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮವಹಿಸಲಾಗುವುದು? | ರಾಜ್ಯದ ಮಹಾನಗರ ಪಾಲಿಕೆಗಳ ಮೇಯರ್, ಉಪಮೇಯರ್ & ಸದಸ್ಯರು ಹಾಗೂ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು & ಸ್ಥಾಯಿ ಸಮಿತಿ ಸದಸ್ಯರಿಗೆ ನೀಡಲಾಗುತ್ತಿರುವ ಗೌರವಧನವನ್ನು ಹೆಚ್ಚಳ ಮಾಡುವ ಬಗ್ಗೆ ಪರಿಶೀಲಿಸಿ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿರುತ್ತದೆ. ಆರ್ಥಿಕ ಇಲಾಖೆಯ ಅಭಿಪ್ರಾಯ/ಸಹಮತಿಯ ನಂತರ ಗೌರವಧನ ಹೆಚ್ಚಳ ಮಾಡುವ ಕುರಿತು ನಿರ್ಧರಿಸಲು ಅವಕಾಶವಾಗುತ್ತದೆ. |

ಪ್ರಸ್ತುತ ನೀಡಲಾಗುತ್ತಿರುವ ಗೌರವಧನ (ಮಾಸಿಕ)

| | ನಗರ ಸ್ಥಳೀಯ ಸಂಸ್ಥೆ | ಅಧ್ಯಕ್ಷರು | ಉಪಾಧ್ಯಕ್ಷರು | ಸ್ಥಾಯಿ ಸಮಿತಿ ಸದಸ್ಯರು | ಸದಸ್ಯರು | ನಾಮ ನಿರ್ದೇಶನ ಸದಸ್ಯರು |
|---|---|---|---|---|---|---|
| 1 | ನಗರ ಸಭೆ-1 | 12000 | 8000 | 400 | 4000 | 4000 |
| 2 | ನಗರ ಸಭೆ-2 | 8000 | 4000 | 400 | 2000 | 2000 |
| 3 | ಪುರ ಸಭೆ | 4800 | 2400 | 300 | 1200 | 1200 |
| 4 | ಪಟ್ಟಣ ಪಂಚಾಯಿತಿ | 3200 | 1600 | 200 | 800 | 800 |

**ಸಂಖ್ಯೆ:ನಅಇ 20 ಎಲ್‌ಸಿಕ್ಯೂ 2026**

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು